**<u>ದಿನಾಂಕಃ 03.02.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಾದ ಶ್ರಿ. ಎಮ್ ಎಸ್ ಎಸ್ ವಕೀಲರಿಂದಃ</u>**

ನಾನು ಈ ದಿನ ನನ್ನ ಮುಖ್ಯ ವಿಚಾರಣೆ ಎಂದು ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿದೆ ಮತ್ತು ವಿಷಯ ತಿಳಿದುಕೊಂಡು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ನಾನು document writer ಆಗಿ ಬನ್ನೂರಿನಲ್ಲಿ ಕೆಲಸ ಮಾಡುತ್ತಿದ್ದು, ಜುಲೈ 1997 ನೇ ಇಸವಿಯಲ್ಲಿ ತಿಮ್ಮಯ್ಯರವರಿಂದ ಸ್ಟಾಂಪ್ ಪೇಪರನ್ನು ತೆಗೆದುಕೊಳ್ಳಲು ಹೋದಾಗ ತಿಮ್ಮಯ್ಯರವರು ಜಯಮ್ಮ ಎನ್ನುವವರು ಹೇಳಿ ಮಾಡಿಸಿದ ವಿಲ್ ಗೆ ನನ್ನು ಸಾಕ್ಷಿಯಾಗಿ ಸಹಿ ಮಾಡಬೇಕೆಂದು ಜಯಮ್ಮರವರು ಕೋರಿದ ಮೇರೆಗೆ ಸಹಿ ಮಾಡಿದ್ದೇನೆ. ಅದೇ ಸಂದರ್ಭದಲ್ಲಿ ವಿಲ್ ನ ವಿಷಯವನ್ನು ಜಯಮ್ಮರವರಿಂದ ತಿಳಿದುಕೊಂಡು , ಓದಿ ನೋಡಿ ಜಯಮ್ಮ ಮತ್ತು ಇಬ್ಬರು ಸಾಕ್ಷಿದಾರರ ಸಹಿ ಮಾಡಿದ ನಂತರ ನಾನು ಸಹಿ ಮಾಡಿದ್ದೇನೆ. ಸದರಿ ದಾಖಲೆಯನ್ನು ಈಗ ನೋಡಿ ಗುರುತಿಸಿದ್ದೇನೆ. ಅದು ಈಗಾಗಲೇ ನಿಪಿ. 1 ಎಂದು ಗುರುತಿಗೆ ಒಳಪಟ್ಟಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ. 1(ಬಿ) ಎಂದು ಗುರುತಿಸಲಾಯಿತು.

**ಪಾಟೀಸವಾಲುಃ** ಎದುರದಾರರು ಯಾರು ಇಲ್ಲದ ಕಾರಣ ಪಾಟೀ ಸವಾಲು ಇಲ್ಲ.

ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸ ಇ ಎ ಒ.,

(ಉಷಾರಾಣಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.